ಸಂ. 4898
ದಿನಾಂಕ 04/12/18

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೆ: ಶ್ರೀ ಜೈಸಂತೋಷಿಮಾತಾ ಸೋಲಾರ್ ಪ್ಲಾಂಟ್ ರವರಿಗೆ ದಾವಣಗೆರೆ ಜಿಲ್ಲೆಯ ಜಗಳೂರು ತಾಲ್ಲೂಕಿನ ಮುದಲಮಚಿಕೆರೆ ಗ್ರಾಮದಲ್ಲಿ ಹಂಚಿಕೆಯಾಗಿರುವ 1.5 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಯೋಜನೆಯ ಹಂಚಿಕೆ ಆದೇಶವನ್ನು ರದ್ದುಗೊಳಿಸುವ ಕುರಿತು.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ : ಇಎನ್ 172 ಎನ್‌ಸಿಇ 2016, ದಿ; 11.07.2016.
2. ಸರ್ಕಾರದ ಆದೇಶ ಸಂಖ್ಯೆ: ಇಎನ್ 68 ಎನ್‌ಸಿಇ 2017, ದಿನಾಂಕ: 09.03.2017.
3. ಸರ್ಕಾರದ ಪತ್ರ ಸಂಖ್ಯೆ: ಇಎನ್ 379 ಎನ್‌ಸಿಇ 2017, ದಿನಾಂಕ: 30.05.2018.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರ ಪತ್ರ ಸಂಖ್ಯೆ: ಕೆ.ಆರ್.ಇ.ಡಿ/07/ಎಸ್‌ಜಿ/ಎಫ್-305/2018/7202-03, ದಿನಾಂಕ: 30.10.2018.

* * *

ಪ್ರಸ್ತಾವನೆ:

MD KREDL 4/12

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರ ಆದೇಶದ ಮೂಲಕ ಮೆ: ಶ್ರೀ ಜೈಸಂತೋಷಿಮಾತಾ ಸೋಲಾರ್ ಪ್ಲಾಂಟ್ ಗೆ ದಾವಣಗೆರೆ ಜಿಲ್ಲೆಯ ಜಗಳೂರು ತಾಲ್ಲೂಕಿನ ಮುದಲಮಚಿಕೆರೆ ಗ್ರಾಮದಲ್ಲಿ ಕೆಲವು ಷರತ್ತುಗಳಿಗೊಳಪಟ್ಟು 1.5 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಉತ್ಪಾದನಾ ಘಟಕವನ್ನು ಸ್ಥಾಪಿಸಿ, ಸದರಿ ಘಟಕದಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ನಿರಾಕ್ಷೇಪಣೆಯನ್ನು ನೀಡಲಾಗಿತ್ತು.

ಸದರಿ ನಿರಾಕ್ಷೇಪಣಾ ಆದೇಶದಲ್ಲಿನ ಷರತ್ತುಗಳ ಪೈಕಿ ಕ್ರಮ ಸಂಖ್ಯೆ (2) ರ ಷರತ್ತಿನಂತೆ ಶ್ರೀ ಜೈಸಂತೋಷಿಮಾತಾ ಸೋಲಾರ್ ಪ್ಲಾಂಟ್ ರವರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸೌರ ನೀತಿ 2014-21 ರ ಪ್ರಕಾರ ಅನ್ವಯವಾಗುವ ಶುಲ್ಕ ಹಾಗೂ ಇತರ ಬ್ಯಾಂಕ್ ಖಾತರಿಯನ್ನು ಪಾವತಿಸಬೇಕಾಗಿತ್ತು. ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಆದೇಶದ ಮೂಲಕ ಖಾಸಗಿ ಸ್ವತಂತ್ರ ವಿದ್ಯುತ್ ಉತ್ಪಾದಕರ ವಿಭಾಗದಡಿ ಸ್ವಂತ ಉಪಯೋಗಕ್ಕಾಗಿ/ಮೂರನೇ ವ್ಯಕ್ತಿಗೆ ಮಾರಾಟ ಮಾಡುವ ಪ್ರವರ್ಗದಡಿ ಹಂಚಿಕೆಯಾಗುವ ಆದೇಶಗಳಲ್ಲಿ ಯೋಜನಾ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸೌರ ನೀತಿ 2014-21 ರ ಪ್ರಕಾರ ಅನ್ವಯವಾಗುವ ಸಂಸ್ಕರಣಾ ಶುಲ್ಕವನ್ನು ಹಂಚಿಕೆ ಆದೇಶದ ದಿನಾಂಕದಿಂದ 15 ದಿನಗಳೊಳಗೆ ಪಾವತಿಸಬೇಕೆಂದು ಹಾಗೂ 45 ದಿನಗಳೊಳಗೆ ಬ್ಯಾಂಕ್ ಖಾತರಿಯನ್ನು ಸಲ್ಲಿಸಬೇಕೆಂದು, ಇಲ್ಲವಾದಲ್ಲಿ ಅಂತಹ ಹಂಚಿಕೆಯ ಆದೇಶವು ತಂತಾನೇ ರದ್ದಾಗುವುದಾಗಿ ಷರತ್ತನ್ನು ಅಳವಡಿಸಲಾಗಿರುತ್ತದೆ.

ಆದರೆ, ಶ್ರೀ ಜೈಸಂತೋಷಿಮಾತಾ ಸೋಲಾರ್ ಪ್ಲಾಂಟ್ ರವರು ಸದರಿ ಷರತ್ತನ್ನು ಪಾಲಿಸದ ಕಾರಣ ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಪತ್ರದ ಮೂಲಕ ಕಲ್ಪಿಸಿರುವ ಅವಕಾಶದನ್ವಯ ಸಂಸ್ಕರಣಾ ಶುಲ್ಕ ಮತ್ತು ನೆರವೇರಿಕೆ ಬ್ಯಾಂಕ್ ಖಾತರಿಯನ್ನು 15 ದಿನಗಳಲ್ಲಿ ಸಲ್ಲಿಸುವಂತೆ, ಇಲ್ಲದಿದ್ದಲ್ಲಿ ಸದರಿ ಸೌರ ವಿದ್ಯುತ್ ಹಂಚಿಕೆಯನ್ನು ರದ್ದುಮಾಡುವುದಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಜಾರಿಗೊಳಿಸಿದ್ದ ನೋಟೀಸಿಗೆ ಶ್ರೀ ಜೈಸಂತೋಷಿಮಾತಾ ಸೋಲಾರ್ ಪ್ಲಾಂಟ್ ರವರು ಯಾವುದೇ ಪ್ರತಿಕ್ರಿಯೆ ವ್ಯಕ್ತಪಡಿಸದಿರುವುದರಿಂದ ಮೇಲೆ ಓದಲಾದ ಕ್ರಮ ಸಂಖ್ಯೆ: (1) ರ ಆದೇಶದ ಮೂಲಕ ಶ್ರೀ ಜೈಸಂತೋಷಿಮಾತಾ ಸೋಲಾರ್ ಪ್ಲಾಂಟ್ ಗೆ ದಾವಣಗೆರೆ ಜಿಲ್ಲೆಯ ಜಗಳೂರು ತಾಲ್ಲೂಕಿನ ಮುದಲಮಚಿಕೆರೆ ಗ್ರಾಮದಲ್ಲಿ ಕೆಲವು ಷರತ್ತುಗಳಿಗೊಳಪಟ್ಟು ಹಂಚಿಕೆಯಾಗಿರುವ 1.5 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಉತ್ಪಾದನಾ ಘಟಕ ಯೋಜನೆಯನ್ನು ರದ್ದುಪಡಿಸಿ ಆದೇಶವನ್ನು ಹೊರಡಿಸುವಂತೆ ಮೇಲೆ

GM (Tech) KREDL

...2)

ಓದಲಾದ ಕ್ರಮ ಸಂಖ್ಯೆ (4) ರ ಪತ್ರದ ಮೂಲಕ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 595 ಎನ್‌ಸಿಇ 2018,**
**ಬೆಂಗಳೂರು, ದಿನಾಂಕ: 01.12.2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಜೈಸಂತೋಷಿಮಾತಾ ಸೋಲಾರ್ ಪ್ಲಾಂಟ್ ಗೆ ದಾವಣಗೆರೆ ಜಿಲ್ಲೆಯ ಜಗಳೂರು ತಾಲ್ಲೂಕಿನ ಮುದಲಮಚಿಕೆರೆ ಗ್ರಾಮದಲ್ಲಿ ಕೆಲವು ಷರತ್ತುಗಳಿಗೊಳಪಟ್ಟು ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಹಂಚಿಕೆಯಾಗಿರುವ 1.5 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಉತ್ಪಾದನಾ ಯೋಜನೆಯನ್ನು ತಕ್ಷಣದಿಂದಲೇ ಜಾರಿಗೆ ಬರುವಂತೆ ರದ್ದುಗೊಳಿಸಿ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ವಿ.ಶ್ರೀನಿವಾಸಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

**ಇವರಿಗೆ:**
ಸಂಕಲನಕಾರರು, ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

**ಪ್ರತಿ:**
1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ/ ಬಹುಮಹಡಿ ಕಟ್ಟಡ/ ವಿಕಾಸ ಸೌಧ, ಬೆಂಗಳೂರು-1.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ನಂ.82, ಶಕ್ತಿ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-560 001.
4. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು-1.
6. ಜಿಲ್ಲಾಧಿಕಾರಿಗಳು, ದಾವಣಗೆರೆ ಜಿಲ್ಲೆ, ದಾವಣಗೆರೆ.
7. ಉಪ ಅರಣ್ಯ ಸಂರಕ್ಷಣಾಧಿಕಾರಿ, ದಾವಣಗೆರೆ ಜಿಲ್ಲೆ, ದಾವಣಗೆರೆ.
8. ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಬೆಂಗಳೂರು.
9. M/s Shree Jai Santhoshimatha Solar Plant, No-1653/23, 4th Cross Siddaveerappa Badavane, Davanagere-577004.
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
11. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
12. ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೆ॥ ಶ್ರೀ ಜೈ ಸಂತೋಷಿ ಮಾತಾ ಸೋಲಾರ್ ಪ್ಲಾಂಟ್ ರವರಿಗೆ ದಾವಣಗೆರೆ ಜಿಲ್ಲೆಯ ಜಗಳೂರು ತಾಲ್ಲೂಕಿನ ಮುದಲಮಚಿಕೆರೆ ಗ್ರಾಮದಲ್ಲಿ 1.5 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಘಟಕದ ಸ್ಥಾಪನೆಗೆ ನಿರಾಕ್ಷೇಪಣಾ ನೀಡುವ ಬಗ್ಗೆ.

ಓದಲಾಗಿದೆ: 1) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರು ಏಕ ಕಡತ ಪದ್ಧತಿಯಡಿ ಸರ್ಕಾರಕ್ಕೆ ಸಲ್ಲಿಸಿರುವ ಕಡತ ಸಂಖ್ಯೆ: 305

2) ದಿನಾಂಕ: 27.02.2016 ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿಗಳು.

* * *

**ಪ್ರಸ್ತಾವನೆ :-**

ಮೆ॥ ಶ್ರೀ ಜೈ ಸಂತೋಷಿ ಮಾತಾ ಸೋಲಾರ್ ಪ್ಲಾಂಟ್ ರವರಿಗೆ ದಾವಣಗೆರೆ ಜಿಲ್ಲೆಯ ಜಗಳೂರು ತಾಲ್ಲೂಕಿನ ಮುದಲಮಚಿಕೆರೆ ಗ್ರಾಮದಲ್ಲಿ 1.5 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಘಟಕ ಸ್ಥಾಪಿಸಲು ಅನುಮತಿ ಕೋರಿ ಸಲ್ಲಿಸಿರುವ ಪ್ರಸ್ತಾವನೆಯನ್ನು ಯೋಜನೆಯ ಸ್ಥಳದ ವಿವರಗಳು ಮತ್ತು ಈ ಕೆಳಕಂಡ ಮಾಹಿತಿಗಳೊಂದಿಗೆ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ರವರು ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಏಕ ಕಡತ ಪದ್ಧತಿಯಡಿ ಶಿಫಾರಸ್ಸು ಮಾಡಿ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

| | | |
|---|---|---|
| ಯೋಜನಾ ಪ್ರದೇಶದ ಜಮೀನಿನ ವಿಧ | : | ಸ್ವಂತ ಜಮೀನು |
| ಯೋಜನಾ ಪ್ರದೇಶದ Co-ordinate ವಿವರ | : | ಅಕ್ಷಾಂಶ: 14°43'N<br>ರೇಖಾಂಶ: 76°32'E |
| ದಿನಾಂಕ: 15.02.2016 ರಂದು ಕಂಪನಿಯ ನೆಟ್‌ವರ್ತ್ | : | ರೂ.3,37,80,551/- |
| ಕಂಪನಿಯ Enrolment ಸಂಖ್ಯೆ ಮತ್ತು ದಿನಾಂಕ | : | 29121307797, 26.12.2015 |
| ಉತ್ಪಾದನೆಯಾಗುವ ವಿದ್ಯುತ್ತಿನ ಉಪಯೋಗದ ವಿಧಾನ | : | ಸ್ವಂತಕ್ಕೆ ಅಥವಾ ಮೂರನೇ ವ್ಯಕ್ತಿಗೆ ಮಾರಾಟ ಮಾಡಲು |
| ನಿಗದಿತ ಶುಲ್ಕ ಪಾವತಿಸಲಾಗಿದೆಯೇ | : | ಹೌದು |
| ಸಮೀಪದ ಸಬ್-ಸ್ಟೇಷನ್ ವಿವರ | : | ಹಿರೇಮಲ್ಲನಹೊಳೆ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ. |

ದಿನಾಂಕ: 27.02.2016 ರಂದು ನಡೆದ ಹಂಚಿಕೆ ಸಮಿತಿ ಸಭೆಯ ಮುಂದೆ ಸದರಿ ಪ್ರಸ್ತಾವನೆಯನ್ನು ಮಂಡಿಸಲಾಗಿತ್ತು. ಈ ಪ್ರಸ್ತಾವನೆಯನ್ನು ಹಂಚಿಕೆ ಸಮಿತಿಯು ಕೂಲಂಕಷವಾಗಿ ಪರಿಶೀಲಿಸಿ ಮೆ॥ ಶ್ರೀ ಜೈ ಸಂತೋಷಿ ಮಾತಾ ಸೋಲಾರ್ ಪ್ಲಾಂಟ್ ರವರಿಗೆ ದಾವಣಗೆರೆ ಜಿಲ್ಲೆಯ ಜಗಳೂರು ತಾಲ್ಲೂಕಿನ ಮುದಲಮಚಿಕೆರೆ ಗ್ರಾಮದಲ್ಲಿ 1.5 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಘಟಕ ಸ್ಥಾಪಿಸಲು ನಿರಾಕ್ಷೇಪಣೆಯನ್ನು ನೀಡಬಹುದೆಂದು ಶಿಫಾರಸ್ಸು ಮಾಡಿರುತ್ತದೆ.

ಮೇಲ್ಕಂಡಂತೆ, ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಗಿನಂತೆ ಆದೇಶಿಸುತ್ತದೆ.

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 172 ಎನ್‌ಸಿಇ 2016,**
**ಬೆಂಗಳೂರು, ದಿನಾಂಕ: 11.7.2016.**

ಮೆ॥ ಶ್ರೀ ಜೈ ಸಂತೋಷಿ ಮಾತಾ ಸೋಲಾರ್ ಪ್ಲಾಂಟ್ ರವರಿಗೆ under IPP category ಅಡಿ ದಾವಣಗೆರೆ ಜಿಲ್ಲೆಯ ಜಗಳೂರು ತಾಲ್ಲೂಕಿನ ಮುದಲಮಚಿಕೆರೆ ಗ್ರಾಮದಲ್ಲಿ 1.5 ಮೆ.ವ್ಯಾ. ಸಾಮರ್ಥ್ಯದ ಸೌರ

--2)

GM (Tech) ... KPCL

ವಿದ್ಯುತ್ ಘಟಕವನ್ನು ಸ್ಥಾಪಿಸಲು ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ **ನಿರಾಕ್ಷೇಪಣೆಯನ್ನು** ನೀಡಲಾಗಿದೆ.

1. ಅಭಿವೃದ್ಧಿದಾರರು ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಸಂಬಂಧಿಸಿದ ಇಲಾಖೆಗಳ/ ಸಂಸ್ಥೆಗಳ ಅನುಮೋದನೆ ಪಡೆದುಕೊಳ್ಳತಕ್ಕದ್ದು;
2. ಮೆ॥ ಶ್ರೀ ಜೈ ಸಂತೋಷಿ ಮಾತಾ ಸೋಲಾರ್ ಪ್ಲಾಂಟ್ ಕಂಪನಿಯವರು ಸೌರ ನೀತಿ 2014-21 ರನ್ವಯ ಈ ಬಾಬ್ತು ಅನ್ವಯಿಸುವ ಶುಲ್ಕ ಹಾಗೂ ಇತರ ಬ್ಯಾಂಕ್ ಖಾತರಿಯನ್ನು ಕೆ.ಆರ್.ಇ.ಡಿ.ಎಲ್.ಗೆ ಪಾವತಿಸತಕ್ಕದ್ದು;
3. ಪ್ರಸ್ತಾಪಿತ ಸೋಲಾರ್ ಪಾರ್ಕ್‌ನಲ್ಲಿ ಉತ್ಪತ್ತಿಯಾಗುವ ವಿದ್ಯುತ್ತನ್ನು ಕೆ.ಇ.ಆರ್.ಸಿ.ಯ ನಿಯಮಗಳನ್ವಯ ಅಭಿವೃದ್ಧಿದಾರರು ಸ್ವಂತಕ್ಕೆ ಬಳಸಿಕೊಳ್ಳಲು ಅಥವಾ ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಿದೆ;
4. ಮೆ॥ ಶ್ರೀ ಜೈ ಸಂತೋಷಿ ಮಾತಾ ಸೋಲಾರ್ ಪ್ಲಾಂಟ್ ಕಂಪನಿಯವರು ಪ್ರಸ್ತಾಪಿತ ಸೌರ ವಿದ್ಯುತ್ ಘಟಕವನ್ನು ಸ್ಥಾಪಿಸಲು ಅಗತ್ಯವಿರುವ ಜಮೀನನ್ನು ಕರ್ನಾಟಕ ಭೂ-ಸುಧಾರಣೆ ಕಾಯ್ದೆಯನ್ವಯ ಖರೀದಿಸತಕ್ಕದ್ದು ಮತ್ತು ಸದರಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕೆ ಭೂ ಪರಿವರ್ತನೆ ಮಾಡಿಕೊಂಡ ನಂತರವೇ ಸೌರ ವಿದ್ಯುತ್ ಘಟಕಗಳನ್ನು ಸ್ಥಾಪಿಸತಕ್ಕದ್ದು;
5. ಮೆ॥ ಶ್ರೀ ಜೈ ಸಂತೋಷಿ ಮಾತಾ ಸೋಲಾರ್ ಪ್ಲಾಂಟ್ ಕಂಪನಿಯವರು ಸ್ಥಾಪಿಸುತ್ತಿರುವ ಈ ಸೌರ ವಿದ್ಯುತ್ ಘಟಕಕ್ಕೆ ಸರ್ಕಾರದ 2014-21 ರ ಸೋಲಾರ್ ನೀತಿ ಹಾಗೂ ಸರ್ಕಾರದ 2014-19 ರ ಕೈಗಾರಿಕಾ ನೀತಿಗಳ ಪ್ರಕಾರ ಅನ್ವಯವಾಗುವ ಸವಲತ್ತುಗಳು ಲಭ್ಯವಾಗುತ್ತವೆ.

ಈ ಆದೇಶವನ್ನು ರದ್ದು ಮಾಡುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಎ.ಎ.ಚಪ್ಪರಬಂದ್),**
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,
☎ 22034674.

**ಇವರಿಗೆ:**
ಸಂಕಲನಕಾರರು, ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

**ಪ್ರತಿ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ/ ಬಹುಮಹಡಿ ಕಟ್ಟಡ/ ವಿಕಾಸ ಸೌಧ, ಬೆಂಗಳೂರು-1.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ನಂ.82, ಶಕ್ತಿ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-560 001.
4. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು-1.
6. ಜಿಲ್ಲಾಧಿಕಾರಿಗಳು, ದಾವಣಗೆರೆ ಜಿಲ್ಲೆ, ದಾವಣಗೆರೆ.
7. ಉಪ ಅರಣ್ಯ ಸಂರಕ್ಷಣಾಧಿಕಾರಿ, ದಾವಣಗೆರೆ ಜಿಲ್ಲೆ, ದಾವಣಗೆರೆ.
8. ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಬೆಂಗಳೂರು.
9. M/s. Shree Jai Santhoshimatha Solar Plant, No-1653/23, 4th Cross Siddaveerappa Badavane, Davanagere- 577 004.
10. ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
11. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
12. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
13. ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.